4. ಶಾಸನ ರಚನೆ

ಕರ್ನಾಟಕ ಧನ ವಿನಿಯೋಗ (ಸಂಖ್ಯೆ 1) ವಿಧೇಯಕ 2005 :

ಅಧ್ಯಕ್ಷರು : ಮಾನ್ಯ ಪಾಪರೆಡ್ಡಿಯವರೇ, ಈಗ ಮಾನ್ಯ ಅರ್ಥ ಸಚಿವರು ಮೇಲ್ಮನೆಗೆ ಹೋಗಬೇಕಂತೆ, ಒಂದು ಬಿಲ್ ಇದೆ. ಆನಂತರ ತಾವು ಮಾತನಾಡಿ. ಈಗ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕ 2005, ವಿಧೇಯಕವನ್ನು ಮಂಡಿಸಲು ಅನುಮತಿಯನ್ನು ಕೋರುವುದು.

ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕ, 2005

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) :– ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು) :– ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ".

ಅಧ್ಯಕ್ಷರು :– ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ – III)

ವಿಧೇಯಕವನ್ನುಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕ, 2005

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೆ, "2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ".

ಪ್ರಸ್ತಾವವನ್ನು ಮಂಡಿಸಲಾಯಿತು.

ಅಧ್ಯಕ್ಷರು :– ಇದರ ಬಗ್ಗೆ ವಿವರಿಸಿ.

ಶ್ರೀ ಸಿದ್ಧರಾಮಯ್ಯ :– ಇದು ನಮ್ಮ ಮೂರನೆಯ ಸಪ್ಲಿಮೆಂಟರಿ ಎಸ್ಟಿಮೆಟ್ಸ್. ಈಗಾಗಲೇ ಸದನ ಒಪ್ಪಿಗೆ ಕೊಟ್ಟಿದೆ. ಅದಕ್ಕೋಸ್ಕರ ಈ ವಿಧೇಯಕವನ್ನು ತರಲಾಗಿದೆ.

ಅಧ್ಯಕ್ಷರು :– ಪ್ರಸ್ತಾವ ಏನೆಂದರೆ;

"2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಪರ್ಯಾಲೋಚಿಸುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ಮತ್ತು 3

ಅಧ್ಯಕ್ಷರು :– "ಪ್ರಸ್ತಾವ ಏನೆಂದರೆ ಖಂಡ 2 ಮತ್ತು 3, ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ".

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ಮತ್ತು 3, ಎರಡೂ ಸೇರಿದಂತೆ, ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗಿಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು ಹಾಗೂ ಹಣಕಾಸು ಸಚಿವರು): ಮಾನ್ಯ ಅಧ್ಯಕ್ಷರೇ, "2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ".

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಧನವಿನಿಯೋಗ (ಸಂಖ್ಯೆ 1) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

5. ವಿತ್ತೀಯ ಕಾರ್ಯಕಲಾಪ

2004 –2005ನೇ ಸಾಲಿನ ಆಯವ್ಯಯ ಮೇಲಿನ ಚರ್ಚೆ (ಮುಂದು)

ಅಧ್ಯಕ್ಷರು :– ಈಗ ಪಾಪರೆಡ್ಡಿಯವರು. ಪಾಪರೆಡ್ಡಿಯವರೇ, ತಾವು ಮಾತನಾಡಿ.

ಶ್ರೀ ಎ. ಪಾಪರೆಡ್ಡಿ (ರಾಯಚೂರು) :– ಮಾನ್ಯ ಅಧ್ಯಕ್ಷರೇ, ರಾಯಚೂರು ಜಿಲ್ಲೆಗೆ ಹಾಗೂ ಕೊಪ್ಪಳ ಜಿಲ್ಲೆಗೆ ವರದಾನವಾದಂಥ ತುಂಗಭದ್ರಾ ಎಡದಂಡೆ ಕಾಲುವೆಗೆ ಕನಿಷ್ಠ 200 ಕೋಟಿ ರೂಪಾಯಿಗಳನ್ನಾದರೂ ಬಿಡುಗಡೆ ಮಾಡಬೇಕು ಎನ್ನುವ ವಿನಂತಿಯಿತ್ತು. ಆದರೆ ಸರ್ಕಾರ ತನ್ನ ಬಜೆಟ್‌ನಲ್ಲಿ ಕೇವಲ 30 ಕೋಟಿ ರೂಪಾಯಿಗಳನ್ನು ಮಾತ್ರ ಕೊಟ್ಟಿದೆ. ಆ ಕಾಲುವೆ ರಿಪೇರಿಯಾಗದೇ ಹೋದರೆ ಕೆಳಭಾಗದ ರೈತರಿಗೆ ನೀರು ಸಿಗುವುದಿಲ್ಲ. ಆರು ಲಕ್ಷ ಭೂಮಿಗೆ ನೀರುಣಿಸುವಂಥ ಒಂದು ದೊಡ್ಡ ಕಾಲುವೆಯಿದು. ಇಡೀ ರಾಯಚೂರು ಮತ್ತು ಕೊಪ್ಪಳ ಜಿಲ್ಲೆಗಳ ಆರ್ಥಿಕ ಪರಿಸ್ಥಿತಿ ಆ ಕಾಲುವೆಯ ಮೇಲೆ ಅವಲಂಬನೆಯಾಗಿದೆ. ಕೊನೆಯ ಭಾಗದಲ್ಲಿರುವಂಥ ರೈತರಿಗೆ ಇವತ್ತು ನೀರೇ ಇಲ್ಲ. ಸತತವಾಗಿ ನಾಲ್ಕು ವರ್ಷಗಳಿಂದ ಅಲ್ಲಿ ನೀರು ಇಲ್ಲದೇ, ಅಲ್ಲಿಯ ರೈತರು ತಮ್ಮ ಹೊಲಗಳನ್ನು ಮಾರಿ ವಲಸೆ ಹೋಗುತ್ತಿದ್ದಾರೆ. ಇಂಥ ಪರಿಸ್ಥಿತಿ ಅಲ್ಲಿ ಇದೆ. ಕಾಲುವೆ ರಿಪೇರಿಯಾಗಿದ್ದರೆ ಕೊನೆಯ ಭಾಗದ ರೈತರಿಗೆ ನೀರು ಸಿಗುತ್ತಿತ್ತು. ಇವತ್ತು ರೈತರು ಆತಂಕದ ವಾತವರಣದಲ್ಲಿದ್ದಾರೆ. ನಮ್ಮ ಘನ ಸರ್ಕಾರ 30 ಕೋಟಿ ರೂಪಾಯಿಗಳ ಬದಲು ಒಂದು ನೂರು ಕೋಟಿ ರೂಪಾಯಿಗಳನ್ನಾದರೂ ಕೊಟ್ಟಿದ್ದರೆ, ಕಾಲುವೆ ರಿಪೇರಿಯಾಗಿ ಕೊನೆಯ ಭಾಗದ ರೈತರಿಗೆ ನೀರು ಸಿಗುತ್ತಿತ್ತು. ಆ ಕಾರಣದಿಂದ, ನಮ್ಮ ಭಾಗದ ರೈತರಿಗೆ ಅನ್ಯಾಯವಾಗದಂತೆ ನಮ್ಮ ಆರ್ಥಿಕ ಸಚಿವರಾದಂಥ ಮಾನ್ಯ ಸಿದ್ಧರಾಮಯ್ಯನವರು ಒಂದು ನೂರು ಕೋಟಿ ರೂಪಾಯಿಗಳನ್ನಾದರೂ ಕೊಡಬೇಕು ಎನ್ನುವುದು ನನ್ನ ವಿನಂತಿ. ಅದೇ ರೀತಿ ದೊಡ್ಡ ಪ್ರಾಜೆಕ್ಟಾದ ಯು ಕೆ ಪಿ ಪ್ರಾಜೆಕ್ಟ್ ನಮ್ಮ ರಾಯಚೂರು ಜಿಲ್ಲೆಯಲ್ಲಿದೆ. 173 ಟಿ ಎಂ ಸಿ ನೀರು ನಿಲ್ಲಿಸುವಂಥ ಒಂದು ದೊಡ್ಡ ಪ್ರಾಜೆಕ್ಟ್ ಅದು. ಇವತ್ತು ಅಲ್ಲಿ 173 ಟಿ ಎಂ ಸಿ ನೀರು ನಿಂತಿದೆ. ಆ ಡ್ಯಾಂನಲ್ಲಿ ನೀರಿದ್ದರೂ, ಕಾಲುವೆಗಳ ಕೆಲಸ ಪೂರ್ಣವಾಗದಿರುವುದರಿಂದ ನೀರು ಸಿಗುತ್ತಿಲ್ಲ. 95 ಕಿ.ಮೀ. ವರೆಗೆ